ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 224-ಎ ರನ್ವಯ ಸರ್ಕಾರಿ ನೌಕರನು ಹಿಂದೆ ಸರ್ಕಾರದ ಇಲಾಖೆಗಳಲ್ಲಿ ಸಕ್ರಮವಾಗಿ ಸಲ್ಲಿಸಿದ ಸೇವೆಯನ್ನು ಪಿಂಚಣಿ ಉದ್ದೇಶಗಳಿಗಾಗಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವ ಅಧಿಕಾರವನ್ನು ಇಲಾಖಾ ಮುಖ್ಯಸ್ಥರಿಗೆ ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಎಸ್‌ಆರ್‌ಎ 2011, ದಿನಾಂಕ:05/03/2011.

ಪ್ರಸ್ತಾವನೆ:

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಎ ರನ್ವಯ ಸರ್ಕಾರಿ ನೌಕರರು ಹಿಂದೆ ಬೇರೆ ಸರ್ಕಾರಿ ಇಲಾಖೆಗಳಲ್ಲಿ ಸಕ್ರಮವಾಗಿ ಸಲ್ಲಿಸಿದ ಸೇವೆಯನ್ನು ಪಿಂಚಣಿ ಉದ್ದೇಶಗಳಿಗೆ ಅರ್ಹತಾದಾಯಕ ಸೇವೆಯೆಂದು ಅನುಮತಿಸುವ ಅಧಿಕಾರವನ್ನು ಕೆಲವೊಂದು ಷರತ್ತು, ನಿಬಂಧನೆ ಮತ್ತು ವಿಧಿವಿಧಾನಗಳಿಗೆ ಒಳಪಟ್ಟು ಆಡಳಿತ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿತ್ತು.

ಸರ್ಕಾರಿ ನೌಕರರು ಹಿಂದೆ ಸರ್ಕಾರಿ ಇಲಾಖೆಗಳಲ್ಲಿ ಸಕ್ರಮವಾಗಿ ಸಲ್ಲಿಸಿದ ಸೇವೆಯನ್ನು ಪಿಂಚಣಿ ಉದ್ದೇಶಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವ ಕುರಿತಂತೆ ಆಯಾ ಇಲಾಖಾ ಮುಖ್ಯಸ್ಥರಿಂದ ಸ್ವೀಕರಿಸಿದ ಪ್ರಸ್ತಾವನೆಗಳ ಕುರಿತು ಸರ್ಕಾರದ ಮಟ್ಟದಲ್ಲಿ ಕ್ರಮವಹಿಸಲಾಗುತ್ತಿದ್ದು, ಸರ್ಕಾರದ ಮಟ್ಟದಲ್ಲಿನ ಅಧಿಕ ಕೆಲಸ ಒತ್ತಡದ ಕಾರಣ ಪ್ರಕರಣಗಳು ಇತ್ಯರ್ಥಗೊಳ್ಳಲು ಅಗತ್ಯಕ್ಕಿಂತ ಹೆಚ್ಚಿನ ಸಮಯ ವ್ಯಯವಾಗುತ್ತಿರುವುದರಿಂದ, ಇಂತಹ ಪ್ರಕರಣಗಳನ್ನು ಇಲಾಖಾ ಮುಖ್ಯಸ್ಥರು ತಮ್ಮ ಹಂತದಲ್ಲಿಯೇ ಇತ್ಯರ್ಥಗೊಳಿಸಲು ಅನುಕೂಲವಾಗುವಂತೆ ಈಗಾಗಲೇ ಸರ್ಕಾರದ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಅಧಿಕಾರವನ್ನು ಆಯಾ ಇಲಾಖೆಯ ಇಲಾಖಾ ಮುಖ್ಯಸ್ಥರಿಗೆ ಪ್ರತ್ಯಾಯೋಜಿಸುವುದು ಅಗತ್ಯವೆಂದು ಪರಿಗಣಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01(ಇ) ಎಸ್‌ಆರ್‌ಎ 2020, ದಿನಾಂಕ:07/08/2020**

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಎ ರನ್ವಯ ಸರ್ಕಾರಿ ನೌಕರರು ಹಿಂದೆ ಸರ್ಕಾರದ ಇಲಾಖೆಗಳಲ್ಲಿ ಸಕ್ರಮವಾಗಿ ಸಲ್ಲಿಸಿದ ಸೇವೆಯನ್ನು ಪಿಂಚಣಿ ಉದ್ದೇಶಗಳಿಗೆ ಅರ್ಹತಾದಾಯಕ ಸೇವೆಯೆಂದು ಅನುಮತಿಸುವ ಅಧಿಕಾರವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 01 ಎಸ್‌ಆರ್‌ಎ 2011, ದಿನಾಂಕ:05/03/2011ರಲ್ಲಿ ತಿಳಿಸಿರುವ ಷರತ್ತು, ನಿಬಂಧನೆ ಮತ್ತು ವಿಧಿವಿಧಾನಗಳಿಗೆ ಒಳಪಟ್ಟು ಅರ್ಹ ಪ್ರಕರಣಗಳಲ್ಲಿ ಸೂಕ್ತ ಆದೇಶ ಹೊರಡಿಸಲು ಆಯಾ ಇಲಾಖೆಯ ಮುಖ್ಯಸ್ಥರುಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಜಿ.ಬಿ. ಹೇಮಣ್ಣ)**
ಸರ್ಕಾರದ ಉಪ ಕಾರ್ಯದರ್ಶಿ-2,
ಆರ್ಥಿಕ ಇಲಾಖೆ.

ಸಂಕಲನಕಾರರು, ಕನಾಟಕ ರಾಜ್ಯಪತ್ರ, ಬೆಂಗಳೂರು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

2..

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕನಾಟಕ ಗೆಜೆಟೆಡ್ ಮುಂದಿನ ಪ್ರಕರಣಗಳಲ್ಲಿ ಪ್ರಕಟಿಸುವುದಕ್ಕಾಗಿ.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ/ಶಾಖೆಯ ರಕ್ಷಾ ಕಡತ.
20. ಗಣಕ ಯಂತ್ರ ಶಾಖೆ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆ ಅಧಿಕೃತ ಅಂತರ್ಜಾಲತಾಣ www.finance.karnataka.nic.in ವೀಕ್ಷಿಸಿ.